## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ರವರು ಪ್ರಸ್ತಾಪಿಸಿರುವ ಶೂನ್ಯ ವೇಳೆಯ ಸೂಚನೆಗೆ ಉತ್ತರ.

**ಪ್ರಶ್ನೆ:** ಮಂಗಳೂರು ಕಾಲೇಜಿನ ವಿದ್ಯಾರ್ಥಿಯೊಬ್ಬ ಕಾಣೆಯಾಗಿ ಇಂದಿಗೆ 10 ದಿನ ಕಳೆದರೂ ಯಾವುದೇ ಸುಳಿವು ಸಿಗದಿರುವುದು ದಕ್ಷಿಣ ಕನ್ನಡ ಸೇರಿದಂತೆ ಕರಾವಳಿಯಾದ್ಯಂತ ಜನರಲ್ಲಿ ಆತಂಕ ಮೂಡಿಸಿದೆ.

ಮಂಗಳೂರಿನ ಕಾಲೇಜೊಂದರಲ್ಲಿ ವ್ಯಾಸಂಗ ಮಾಡುತ್ತಿದ್ದ, ಫರಂಗಿ ಪೇಟೆ ಸಮೀಪದ ಕಿದೆಬೆಟ್ಟು ನಿವಾಸಿ ಪದ್ಮನಾಭ ಅವರ ಪುತ್ರ ದಿಗಂತ್ (17 ವರ್ಷ) ಫೆಬ್ರುವರಿ 25ರ ಸಂಜೆ ಆಂಜನೇಯ ದೇವಸ್ಥಾನಕ್ಕೆ ಹೋಗುವುದಾಗಿ ಹೇಳಿ ಬಳಿಕ ನಾಪತ್ತೆಯಾಗಿರುತ್ತಾನೆ. ಹುಡುಕಾಡಿದಾಗ ಆತನ ಚಪ್ಪಲಿ-ಮೊಬೈಲ್ ಫೋನ್ ಸಮೀಪದ ರೈಲು ಹಳಿಯಲ್ಲಿ ಬಿದ್ದಿರುವುದು ಪತ್ತೆಯಾಗಿ ಮತ್ತಷ್ಟು ಆತಂಕ ಹಾಗೂ ಭಯದ ವಾತಾವರಣ ಸೃಷ್ಟಿಯಾಗಿದೆ.

ಸದರಿ ಪ್ರಕರಣದ ಕುರಿತು ಎಲ್ಲಾ ಆಯಾಮಗಳಿಂದ ಸಮಗ್ರ ತನಿಖೆ ನಡೆಸಿ ವಿದ್ಯಾರ್ಥಿ ನಾಪತ್ತೆ ಪ್ರಕರಣವನ್ನು ಶೀಘ್ರದಲ್ಲಿ ಭೇದಿಸುವಂತೆ ಹಾಗೂ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾರಕವಾಗಿರುವ ಈ ಭಾಗದಲ್ಲಿ ಹೆಚ್ಚುತ್ತಿರುವ ಅಕ್ರಮ ಗಾಂಜಾ-ಮಾದಕ ವಸ್ತುಗಳ ಮಾರಾಟ ತಡೆಯಲು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕೆಂಬುದರ ಬಗ್ಗೆ.

**ಉತ್ತರ:** ದಿನಾಂಕ 26.02.2025 ರಂದು ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ವ್ಯಾಪ್ತಿಯ ಬಂಟ್ವಾಳ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ಬಂಟ್ವಾಳ ತಾಲ್ಲೂಕು ಪುದು ಗ್ರಾಮದ ಅಮ್ಮೆಮಾರ್ ಕಿದೆಬೆಟ್ಟು ಎಂಬಲ್ಲಿಯ ಪದ್ಮನಾಭ ಎಂಬುವರು ಠಾಣೆಗೆ ಬಂದು ದೂರು ನೀಡಿದ್ದು, ಸದರಿ ದೂರುದಾರರವರ ಹಿರಿಯ ಮಗ ದಿಗಂತ್, ಪ್ರಾಯ: 17 ವರ್ಷ ಈತನು ಮಂಗಳೂರು ಪಂಪುವೆಲ್ ಬಳಿಯ ಕಪಿತಾನಿಯೊ ಪದವಿಪೂರ್ವ ಕಾಲೇಜಿನಲ್ಲಿ ದ್ವಿತೀಯ ವರ್ಷದ ಪಿಯುಸಿ (PCMC) ಕಲಿಯುತ್ತಿದ್ದು, ಅವನಿಗೆ ದಿನಾಂಕ:03.03.2025 ರಿಂದ ವಾರ್ಷಿಕ ಪರೀಕ್ಷೆ ಪ್ರಾರಂಭವಾಗಲಿದ್ದು, ದಿನಾಂಕ 25.02.2025 ರಂದು ಆತನು ಕಾಲೇಜಿಗೆ ಹೋಗಿ ಹಾಲ್ ಟಿಕೇಟ್ ಪಡೆದುಕೊಂಡು ಮನೆಗೆ ಬಂದಿರುತ್ತಾನೆ. ಸಂಜೆ ಸುಮಾರು 7.00 ಗಂಟೆ ಸಮಯಕ್ಕೆ ಫರಂಗಿಪೇಟೆಯ ಆಂಜನೇಯ ದೇವಸ್ಥಾನಕ್ಕೆ ಹೋಗಿ ಬರುವುದಾಗಿ ಮನೆಯಲ್ಲಿ ಪಿರ್ಯಾದುದಾರರ ಪತ್ನಿಯಲ್ಲಿ ಹೇಳಿ ಹೋಗಿದ್ದು, ರಾತ್ರಿ ಸುಮಾರು 9.30 ಗಂಟೆಯ ತನಕವೂ ಬಾರದೆ ಇದ್ದಾಗ ಹುಡುಕಿಕೊಂಡು ಆಂಜನೇಯ ದೇವಸ್ಥಾನಕ್ಕೆ ಹೋದಾಗ ಅಲ್ಲಿ ದೇವಸ್ಥಾನದ ಬಾಗಿಲು ಮುಚ್ಚಿದ್ದು ಅಲ್ಲಿದ್ದ ಚಾರ್ಲಿ ಎಂಬವರೊಡನೆ ವಿಚಾರಿಸಿದಾಗ ಮಗನು ದೇವಸ್ಥಾನಕ್ಕೆ ಬಂದಿರುವುದಿಲ್ಲ ಎಂದು ತಿಳಿಸಿರುತ್ತಾರೆ. ರೈಲ್ವೇ ಟ್ರಾಕಿನಲ್ಲಿ ಹುಡುಕುತ್ತಾ ಹೋಗುತ್ತಿರುವಾಗ ಮನೆಯಿಂದ ಸುಮಾರು 200 ಮೀಟರ್ ದೂರದಲ್ಲಿ ರೈಲ್ವೇ ಹಳಿಯಲ್ಲಿ ಆತನ ಚಪ್ಪಲಿಗಳು ಮತ್ತು ಮೊಬೈಲ್ ಫೋನ್ ಬಿದ್ದಿರುವುದು ಕಂಡು ಬಂದಿದ್ದು, ಪಿರ್ಯಾದುದಾರರ ಸಂಬಂಧಿಕರ ಮನೆಯಲ್ಲಿ, ಸ್ನೇಹಿತರ ಮನೆಯಲ್ಲಿ, ಆತನ ಸ್ನೇಹಿತರೊಡನೆ ವಿಚಾರಿಸಿದ್ದು ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಬಂಟ್ವಾಳ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ:17/2025 ಕಲಂ 137(2) BNS ರಂತೆ ಪ್ರಕರಣ ದಾಖಲಿಸಿಕೊಳ್ಳಲಾಗಿರುತ್ತದೆ.

ಈ ಪ್ರಕರಣದಲ್ಲಿ ಕಾಣೆಯಾದ ಬಾಲಕನ ಪತ್ತೆಯ ಬಗ್ಗೆ ಬಂಟ್ವಾಳ ಪೊಲೀಸ್ ಉಪಾಧೀಕ್ಷಕರಾದ ಶ್ರೀ. ವಿಜಯಪ್ರಸಾದ್.ಎಸ್ ರವರ ನೇತೃತ್ವದಲ್ಲಿ ಜಿಲ್ಲೆಯ ಪೊಲೀಸ್ ಅಧಿಕಾರಿಗಳನ್ನು ಒಳಗೊಂಡ 7 ವಿಶೇಷ ತಂಡಗಳನ್ನು ರಚಿಸಲಾಗಿರುತ್ತದೆ. ಈ ಪ್ರಕರಣದ

ತನಿಖೆಯನ್ನು ಶಿವಕುಮಾರ ಬಿ. ಪೊಲೀಸ್ ನಿರೀಕ್ಷಕರು, ಬಂಟ್ವಾಳ ಗ್ರಾಮಾಂತರ ಪೊಲೀಸ್ ಠಾಣೆ ರವರಿಗೆ ವಹಿಸಲಾಗಿರುತ್ತದೆ. ಕಾಣೆಯಾದ ಬಾಲಕ ದಿಗಂತ್ ಓದುತ್ತಿದ್ದ ಕಾಲೇಜಿಗೆ ಭೇಟಿ ನೀಡಲಾಗಿದ್ದು, ಸ್ನೇಹಿತರನ್ನು ಕಾಲೇಜಿನ ಪ್ರಾಧ್ಯಾಪಕರನ್ನು, ಸ್ಥಳೀಯರನ್ನು, ಮನೆಯ ಸದಸ್ಯರನ್ನು ವಿಚಾರಿಸಿ ಹೇಳಿಕೆ ಪಡೆದುಕೊಳ್ಳಲಾಗಿದೆ. ಬಾಲಕನ ಮೊಬೈಲ್‌ನ್ನು ಸ್ವಾಧೀನಪಡಿಸಿಕೊಳ್ಳಲಾಗಿದ್ದು, ವಿಶ್ಲೇಷಣೆಯ ಸಲುವಾಗಿ ತಜ್ಞರಲ್ಲಿಗೆ ಕಳುಹಿಸಲಾಗಿರುತ್ತದೆ. ಬಾಲಕನ ಮೊಬೈಲ್ ಸಂಖ್ಯೆಯ ಸಿ.ಡಿ.ಆರ್. ಐ.ಪಿ.ಡಿ.ಆರ್ ಮಾಹಿತಿಯನ್ನು ಪಡೆದುಕೊಂಡು ವಿಶ್ಲೇಷಣೆ ನಡೆಸಲಾಗಿರುತ್ತದೆ. ಜಿಲ್ಲಾ ಶ್ವಾನದಳದ ತಜ್ಞರಿಂದ ತಪಾಸಣೆ ನಡೆಸಲಾಗಿರುತ್ತದೆ. ಡ್ರೋನ್ ಕ್ಯಾಮರಾ ಬಳಸಿ ರೈಲ್ವೆ ಹಳಿಯಲ್ಲಿ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ತಪಾಸಣೆ ನಡೆಸಲಾಗಿರುತ್ತದೆ. ಜಿಲ್ಲಾ ಸಶಸ್ತ್ರ ಮೀಸಲು ದಳದ ಸಿಬ್ಬಂದಿಗಳು ಹಾಗು ಸ್ಥಳೀಯ ಪೊಲೀಸರು ರೈಲ್ವೆ ಹಳಿಯ ಎರಡು ಬದಿಯಲ್ಲಿ ಹಾಗೂ ಸುತ್ತಲಿನ ಪ್ರದೇಶದಲ್ಲಿ ತಪಾಸಣೆ ನಡೆಸಿರುತ್ತಾರೆ. ಸ್ಥಳೀಯ ಸಿ.ಸಿ.ಕ್ಯಾಮರಾ ಹಾಗೂ ಮಂಗಳೂರು ರೈಲ್ವೆ ನಿಲ್ದಾಣ, ಬಸ್ ನಿಲ್ದಾಣಗಳಲ್ಲಿರುವ ಸಿ.ಸಿ. ಕ್ಯಾಮರಾದ ಫೂಟೇಜ್ ನ್ನು ಸಂಗ್ರಹಿಸಿ ಪರಿಶೀಲಿಸಲಾಗಿದೆ.

ಬಾಲಕನ ಪತ್ತೆ ಕಾರ್ಯದಲ್ಲಿರುವಾಗ ದಿನಾಂಕ: 08/03/2025 ರಂದು ಉಡುಪಿಯ ಡಿಮಾರ್ಟ್‌ನಲ್ಲಿ ಸದರಿ ಬಾಲಕನು ಇರುವುದಾಗಿ ಮಾಹಿತಿ ಬಂದ ಮೇರೆಗೆ ತನಿಖಾಧಿಕಾರಿಗಳಾದ ಶಿವಕುಮಾರ್.ಬಿ ಪೊಲೀಸ್ ನಿರೀಕ್ಷಕರು, ಬಂಟ್ವಾಳ ಗ್ರಾಮಾಂತರ ಪೊಲೀಸ್ ಠಾಣೆ ರವರು ಉಡುಪಿಗೆ ತೆರಳಿ ಉಡುಪಿ ಜಿಲ್ಲಾ ಪೊಲೀಸರ ಸಹಕಾರದಿಂದ ಸದರಿ ಬಾಲಕನನ್ನು ಪತ್ತೆ ಮಾಡಿಕೊಂಡು ಬಂದು ವಿಚಾರಿಸಲಾಗಿ, ಸದರಿ ಬಾಲಕ ದಿಗಂತನು ದ್ವಿತೀಯ ಪಿ.ಯು.ಸಿ ಪರೀಕ್ಷೆಗೆ ಹೆದರಿ ಮನೆ ಬಿಟ್ಟು ಶಿವಮೊಗ್ಗ, ಮೈಸೂರು, ಕೆಂಗೇರಿ, ನಂದಿಬೆಟ್ಟ ಕಡೆ ಸಂಚರಿಸಿಕೊಂಡು ನಂತರ ಉಡುಪಿಗೆ ಬಂದು ಡಿಮಾರ್ಟ್‌ನಲ್ಲಿ ಬಟ್ಟೆ ಖರೀದಿಸುವ ಸಮಯ ಪತ್ತೆಯಾಗಿರುತ್ತಾನೆ. ಸದರಿ ಬಾಲಕನನ್ನು ಮಕ್ಕಳ ಕಲ್ಯಾಣ ಸಮಿತಿ ರವರ ಮುಂದೆ ಹಾಜರುಪಡಿಸಿ, ಬಾಲ ಮಂದಿರಕ್ಕೆ ಸೇರಿಸಲಾಗಿದೆ. ಬಾಲಕನ ಪೋಷಕರು ಉಚ್ಚ ನ್ಯಾಯಾಲಯ, ಕರ್ನಾಟಕದಲ್ಲಿ ಹೇಬಿಯಸ್ ಕಾರ್ಪಸ್ ಅರ್ಜಿ ಸಲ್ಲಿಸಿರುವುದರಿಂದ, ಮಾನ್ಯ ನ್ಯಾಯಾಲಯಕ್ಕೆ ದಿನಾಂಕ: 12.03.2025 ರಂದು ವರದಿ ಸಲ್ಲಿಸಿ ಘನ ನ್ಯಾಯಾಲಯದ ಆದೇಶದಂತೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ.

ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಯು ಸೇರಿದಂತೆ ಅಕ್ರಮ ಗಾಂಜಾ-ಮಾದಕ ವಸ್ತುಗಳ ಮಾರಾಟ ತಡೆಯಲು ಈ ಕೆಳಗಿನಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ:-

1. "Say Yes to Life No to Drugs" ಘೋಷ ವಾಕ್ಯದೊಂದಿಗೆ "ಕರ್ನಾಟಕ ಪೊಲೀಸ್ ರನ್" ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಅಂತರರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನಾಚರಣೆಯ ಹಿನ್ನೆಲೆಯಲ್ಲಿ "ಮಾದಕ ದ್ರವ್ಯ ಮುಕ್ತ ಭಾರತ" ಘೋಷವಾಕ್ಯದೊಂದಿಗೆ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳೊಂದಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಾರ್ವಜನಿಕರು, ವಿದ್ಯಾರ್ಥಿಗಳು ಹಾಗೂ ಯುವಕರಲ್ಲಿ ಅರಿವನ್ನು ಮೂಡಿಸುವ ಮೂಲಕ ಮಾದಕ ವ್ಯಸನಗಳಿಗೆ ಬಲಿಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

2. ಠಾಣಾ ವ್ಯಾಪ್ತಿಯಲ್ಲಿ ಗುಪ್ತ ಮಾಹಿತಿಯನ್ನು ಕಲೆ ಹಾಕಿ ಮಾದಕ ವಸ್ತುಗಳನ್ನು ಮಾರಾಟ/ಸಾಗಾಟ/ಸೇವನೆ ಮಾಡುವುದನ್ನು ಪತ್ತೆಹಚ್ಚಿ ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ.
3. ಕಾಲಕಾಲಕ್ಕೆ ಜಿಲ್ಲಾ ಮಟ್ಟದಲ್ಲಿ ಒಂದಕ್ಕಿಂತ ಹೆಚ್ಚು ಪ್ರಕರಣಗಳಲ್ಲಿ ಭಾಗಿಯಾಗಿರುವ ರೂಢಿಗತ ಮಾದಕ ದ್ರವ್ಯ ಮಾರಾಟ/ಸಾಗಾಟ ಆರೋಪಿಗಳ ಪೆರೇಡ್ ನಡೆಸಿ ಮಾದಕ ದ್ರವ್ಯ ಮಾರಾಟ/ಸಾಗಾಟದಲ್ಲಿ ತೊಡಗಿಕೊಳ್ಳದಂತೆ ಎಚ್ಚರಿಕೆ ನೀಡಲಾಗಿದೆ.
4. ಈ ಹಿಂದೆ ಮಾದಕ ದ್ರವ್ಯ ಮಾರಾಟ/ಸಾಗಾಟ ಪ್ರಕರಣಗಳಲ್ಲಿ ಭಾಗಿಯಾಗಿರುವ ರೂಢಿಗತ ಆರೋಪಿಗಳನ್ನು ಗುರುತಿಸಿ ಸದರಿಯವರ ವಿರುದ್ಧ ತಾಲ್ಲೂಕು ದಂಡಾಧಿಕಾರಿಗಳಿಗೆ ಮುಂಜಾಗ್ರತಾ ಕ್ರಮದ ವರದಿಯನ್ನು ಸಲ್ಲಿಸಿ ಸದ್ವರ್ತನೆಯನ್ನು ಕಾಯ್ದುಕೊಳ್ಳಲು ಮುಚ್ಚಳಿಕೆಯನ್ನು ಪಡೆಯುವಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.
5. NDPS ಕಾಯ್ದೆಯಡಿಯಲ್ಲಿ ದಾಖಲಾಗುವ ಪ್ರಕರಣಗಳನ್ನು ವಿಶೇಷವಾಗಿ ಮೇಲ್ವಿಚಾರಣೆ ಮಾಡಲು ಸಿಐಡಿ (CID ಘಟಕದಲ್ಲಿ ಹೊಸದಾಗಿ Director General of Police, Cyber Crime and Narcotics ಹುದ್ದೆಯನ್ನು ಸೃಜಿಸಲಾಗಿದೆ.
6. ಮಾದಕದ್ರವ್ಯ ಸೇವನೆ, ಮಾರಾಟ, ಸಂಗ್ರಹಣೆ ಮತ್ತು ಸರಬರಾಜು ಮಾಡುವವರ ವಿರುದ್ಧಕ್ರಮ ಕೈಗೊಳ್ಳುವ ಸಲುವಾಗಿ ಸಿಐಡಿ ಘಟಕದಲ್ಲಿ ವಿಶೇಷ ತರಬೇತಿ ನೀಡುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈಗಾಗಲೇ ರಾಜ್ಯದಲ್ಲಿ 167 ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದೆ.
7. Drugs Free Karnataka Mobile Appನ್ನು ಅಭಿವೃದ್ಧಿಪಡಿಸಿ ಸಾರ್ವಜನಿಕರಲ್ಲಿ ಹಾಗೂ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ ಮಾದಕವಸ್ತು ಬಳಕೆ, ಸಂಗ್ರಹಣೆ ಸರಬರಾಜು ಮೇಲೆ ನಿಯಂತ್ರಣ ಸಾಧಿಸುವ ನಿಟ್ಟಿನಲ್ಲಿ ದಿಟ್ಟ ಕ್ರಮಕೈಗೊಳ್ಳಲಾಗುತ್ತಿದೆ.
8. ಅಕ್ರಮ ಮಾದಕ ವ್ಯಸನವನ್ನು ಪತ್ತೆಹಚ್ಚಲು ಮತ್ತು ನಿರ್ಮೂಲನೆ ಮಾಡಲು, ರಾಜ್ಯಾದ್ಯಂತ ಪೊಲೀಸ್ ಸಿಬ್ಬಂದಿಗಳಿಗೆ NCB (Narcotics Control Bureau) Onlineತರಬೇತಿ ಕಾರ್ಯಕ್ರಮಗಳ ಮುಖಾಂತರ ತರಬೇತಿ ನೀಡಲಾಗುತ್ತಿದೆ. ಈ ಉದ್ದೇಶಕ್ಕಾಗಿ NCB Mobile Application/Web Portal (MAPDRUGS) ಸಹ ಪರಿಚಯಿಸಲಾಗುತ್ತಿದೆ.
9. ಬಸ್‌ನಿಲ್ದಾಣ, ರೈಲ್ವೇ ನಿಲ್ದಾಣ ಮತ್ತು ಮೆಟ್ರೋ ನಿಲ್ದಾಣ ಮುಂತಾದ ಸಾರ್ವಜನಿಕ ಸ್ಥಳಗಳಲ್ಲಿ ಅನುಮಾನಸ್ಪದ ವಸ್ತುಗಳು ಕಂಡಬಂದಲ್ಲಿ ಶ್ವಾನದಳದ ಮುಖಾಂತರ ಮಾದಕ ವಸ್ತುಗಳನ್ನು ಪತ್ತೆ ಹಚ್ಚುವ ಕಾರ್ಯಾಚರಣೆಯಲ್ಲಿ ಬಳಸಲಾಗುತ್ತಿದೆ.

ಸಂಖ್ಯೆ:ಹೆಚ್‌ಡಿ 28 ಪಿಸಿಕ್ಯೂ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು